2. ಸಹಾಯಧನ ಯೋಜನೆ.

3. ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ.

4. ಗಂಗಾ ಕಲ್ಯಾಣ ಯೋಜನೆ.

ಇ) ಬೀಳಗಿ ತಾಲ್ಲೂಕಿನಲ್ಲಿ ಒಂದು ಸಂಸ್ಥೆಗೆ ರೂ. 5.00 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ.

ಈ) **ಇತ್ತೀಚಿನ ಯೋಜನೆಗಳು : (2006–07ನೇ ಸಾಲಿನಿಂದ)**

1. ಅಲ್ಪಸಂಖ್ಯಾತರಿಗಾಗಿ ಕೌಶಲ್ಯ ಅಭಿವೃದ್ಧಿ ಯೋಜನೆ.

2. ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನಗಳು, ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ.

3. ಅಲ್ಪಸಂಖ್ಯಾತರಿಗಾಗಿ ಹೊಸ ವಿದ್ಯಾರ್ಥಿನಿಲಯ ಪ್ರಾರಂಭ (2007–08ನೇ ಸಾಲಿನಲ್ಲಿ 75 ವಿದ್ಯಾರ್ಥಿನಿಲಯಗಳು ಮಂಜೂರಾಗಿವೆ)

4. ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ (ಈ ಕಾರ್ಯಕ್ರಮ ಇನ್ನು ಅನುಮೋದನೆಯ ಹಂತದಲ್ಲಿದೆ)

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಶ್ರಮಶಕ್ತಿ ಯೋಜನೆಯನ್ನು ಕಾರ್ಯರೂಪಕ್ಕೆ ತರಲಾಗುತ್ತಿದೆ.

1123 (542) ಶ್ರೀ ನಿರಾಣಿ ಮುರುಗೇಶ್ ರುದ್ರಪ್ಪ (ಬೀಳಗಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೀಳಗಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ;

ಆ) ಇವುಗಳನ್ನು ಉನ್ನತೀಕರಣಗೊಳಿಸಲಾಗುತ್ತಿದೆಯೇ ;

ಇ) ಬೀಳಗಿ ಸರ್ಕಾರಿ ಆಸ್ಪತ್ರೆಗೆ ವಿಶೇಷ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆಯೆ ; ಈಗ ಅದು ಯಾವ ಹಂತದಲ್ಲಿದೆ ;

ಈ) ಹೊಸ ಆರೋಗ್ಯ ಕೇಂದ್ರಗಳ ಅವಶ್ಯಕತೆಯ ಬಗೆಗಿನ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇದೆಯೇ ;

ಉ) ಬೀಳಗಿ ತಾಲ್ಲೂಕು ಆಸ್ಪತ್ರೆಯಲ್ಲಿ ಬ್ಲಡ್ ಬ್ಯಾಂಕ್ ಸೌಲಭ್ಯವನ್ನು ಒದಗಿಸಲಾಗುವುದೇ ;

ಊ) ಬೀಳಗಿ ತಾಲ್ಲೂಕು ಆಸ್ಪತ್ರೆಯಲ್ಲಿ ಎ.ಎನ್.ಎಂ. ಸಿಬ್ಬಂದಿಯ ಕೊರೆತೆಯಿದ್ದು ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಬೀಳಗಿ ತಾಲ್ಲೂಕಿನಲ್ಲಿ ಒಟ್ಟು 4 ಪ್ರಾ.ಆ. ಕೇಂದ್ರಗಳನ್ನು ಕಾರ್ಯನಿರ್ವಹಿಸುತ್ತಿವೆ. ಬೀಳಗಿ, ಗಿರಿಸಾಗರ, ಗಲಿಗಲಿ ಹಾಗೂ ಕುಂದರಗಿಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಾಗಿವೆ.

ಆ) ಬೀಳಗಿ ಹಾಗೂ ಗಿರಿಸಾಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಇ) ಬೀಳಗಿ ಸಮುದಾಯ ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಕಟ್ಟಡ ಕಾಮಗಾರಿ ಚಾಲನೆಯಲ್ಲಿದ್ದು ಕಟ್ಟಡ ಪೂರ್ಣಗೊಂಡ ನಂತರ ಮಂಜೂರಾದ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

ಈ) ಈ ಹೊಸ ಆರೋಗ್ಯ ಕೇಂದ್ರಗಳನ್ನು ತೆರೆಯುವ ಬಗ್ಗೆ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿರುತ್ತದೆ. ಇವುಗಳನ್ನು ಮಾರ್ಗಸೂಚಿ ಪ್ರಕಾರ ಪರಿಶೀಲಿಸಲಾಗುವುದು.

ಉ) ಬೀಳಗಿ ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಿರುವುದರಿಂದ ಕಟ್ಟಡ ಕಾಮಗಾರಿ ಮುಗಿದ ನಂತರ ರಕ್ತ ಶೇಕರಣ ಕೇಂದ್ರವನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುವುದು.

ಊ) ಬೀಳಗಿ ತಾಲ್ಲೂಕಿನ ಆಸ್ಪತ್ರೆಗಳಲ್ಲಿ 25 ಎ.ಎನ್.ಎಂ. ಹುದ್ದೆಗಳು ಮಂಜೂರಾಗಿದ್ದು, 19 ಎ.ಎನ್.ಎಂ.ಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 6 ಹುದ್ದೆಗಳು ಖಾಲಿ ಇವೆ.

ರಾಜ್ಯದಲ್ಲಿ 23 ಆರೋಗ್ಯ ಸಹಾಯಕಿಯರ ತರಬೇತಿ ಶಾಲೆ ಇದ್ದು, ಇದರಲ್ಲಿ ಪ್ರತಿ ವರ್ಷ 720 ಅಭ್ಯರ್ಥಿಗಳು 18 ತಿಂಗಳ ತರಬೇತಿಯನ್ನು ಪಡೆಯುತ್ತಾರೆ. ಸದ್ಯಕ್ಕೆ ತರಬೇತಿ ಪಡೆದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಯಾರು ಲಭ್ಯ ಇರುವುದಿಲ್ಲ. ತರಬೇತಿ ಪಡೆದು ಉತ್ತೀರ್ಣರಾಗಿ ಬಂದಂತವರಿಗೆ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

1124 (1326) ಶ್ರೀ ಓಲೇಕಾರ ನೆಹರು ಚನ್ನಬಸಪ್ಪ (ಬ್ಯಾಡಗಿ) :– ಮಾನ್ಯ ಪಶುಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ 2001 ರಿಂದ 2007 ರವರೆಗೆ ಇಲಾಖೆಗೆ ಒದಗಿಸಿದ ಹಣವೆಷ್ಟು ; (ವರ್ಷವಾರು ಹಾಗೂ ಜಿಲ್ಲಾವಾರು ಮಾಹಿತಿ ಒದಗಿಸುವುದು)